# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 462 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19/07/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಕಲ್ಯಾಣಕ್ಕಾಗಿ 2023-24ನೇ ಸಾಲಿನಲ್ಲಿ ವಿನಿಯೋಗಿಸಿರುವ ಅನುದಾನವೆಷ್ಟು: | 2022-23ನೇ ಸಾಲಿನಲ್ಲಿ 9.61 ಲಕ್ಷ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಒಟ್ಟು ರೂ.249.00 ಲಕ್ಷಗಳನ್ನು ವಿನಿಯೋಗಿಸಲಾಗಿರುತ್ತದೆ.<br><br>2023-24ನೇ ಸಾಲಿನಲ್ಲಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ರೂ.500.00 ಕೋಟಿಗಳನ್ನು ಮಂಡಳಿಯ ಆಯವ್ಯಯದಲ್ಲಿ ಮೀಸಲಿರಿಸಲಾಗಿದೆ. |
| ಆ) | ಸದರಿ ಅನುದಾನದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಒದಗಿಸಿರುವ ವಿವಿಧ ಸೌಲಭ್ಯಗಳು ಯಾವುವು; ಪ್ರತಿ ಸೌಲಭ್ಯಕ್ಕೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; | ಕಟ್ಟಡ ಮತ್ತು ಇತರೆ ನಿರ್ಮಾಣ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) (ಕರ್ನಾಟಕ) ನಿಯಮಗಳು 2006 ರ ನಿಯಮ 45 ರನ್ವಯ ಕಟ್ಟಡ ಕಾರ್ಮಿಕರ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ಶೈಕ್ಷಣಿಕ ಧನಸಹಾಯವನ್ನು ನೀಡಲಾಗುವುದು.<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ 2023-24ನೇ ಸಾಲಿಗೆ ಇ-ಆಡಳಿತ ಇಲಾಖೆಯ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ (ಎಸ್.ಎಸ್.ಪಿ) ಮೂಲಕ ಶೈಕ್ಷಣಿಕ ಧನಸಹಾಯಕ್ಕಾಗಿ ಅರ್ಜಿಗಳನ್ನು ಮಾರ್ಚ್ 2024 ರಲ್ಲಿ ಆಹ್ವಾನಿಸಲಾಗಿರುತ್ತದೆ. ಆದರೆ, ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದುದರಿಂದ ಸದರಿ ಕಾರ್ಯವು ತಾತ್ಕಾಲಿಕವಾಗಿ ಸ್ಥಗಿತಗೊಂಡಿರುತ್ತದೆ. ಈ ಹಿನ್ನೆಲೆಯಲ್ಲಿ, ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಕೊನೆಯ ದಿನಾಂಕವನ್ನು ದಿನಾಂಕ: 31-07-2024 ರವರೆಗೆ ವಿಸ್ತರಿಸಲಾಗಿರುವುದರಿಂದ, ಶೈಕ್ಷಣಿಕ ಧನಸಹಾಯಕ್ಕೆ ಮೀಸಲಿರಿಸಿದ ಅನುದಾನವನ್ನು ವಿನಿಯೋಗಿಸಲು ಸಾಧ್ಯವಾಗಿರುವುದಿಲ್ಲ. |

| | | |
|---|---|---|
| ಇ) | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಶೈಕ್ಷಣಿಕ ಧನ ಸಹಾಯಕ್ಕಾಗಿ 2023-24ನೇ ಸಾಲಿನಲ್ಲಿ ವಿನಿಯೋಗಿಸಿರುವ ಅನುದಾನವೆಷ್ಟು; ಸದರಿ ಸಾಲಿನಲ್ಲಿ ಶೈಕ್ಷಣಿಕ ಧನ ಸಹಾಯ ಪಡೆದ ಮಕ್ಕಳ ಸಂಖ್ಯೆ ಎಷ್ಟು; | ಕ್ರಮ ಸಂಖ್ಯೆ: (ಅ) ರಲ್ಲಿ ನೀಡಿರುವ ಉತ್ತರದಿಂದ ಅನ್ವಯಿಸುವುದಿಲ್ಲ. |
| ಈ) | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಶೈಕ್ಷಣಿಕ ಧನ ಸಹಾಯಕ್ಕಾಗಿ 2023-24ನೇ ಸಾಲಿನಲ್ಲಿ ಧನ ಸಹಾಯಕ್ಕಾಗಿ ಅರ್ಜಿ ಸಲ್ಲಿಸಿದ್ದು, ಇದುವರೆಗೂ ಧನಸಹಾಯ ದೊರೆಯದಿರುವ ಪ್ರಕರಣಗಳೆಷ್ಟು? (ವಿವರ ನೀಡುವುದು) | ಕ್ರಮ ಸಂಖ್ಯೆ. (ಆ) ನೀಡಿರುವ ಉತ್ತರದಿಂದ ಅನ್ವಯಿಸುವುದಿಲ್ಲ. |

**ಕಾಇ 291 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**